**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ನಂ. 93/2020**

**ಚಾ.ಸಾಃ 4, ಫ್ರಾ.ಸಾಃ 6**

| | |
|---|---|
| ಸಾಕ್ಷಿದಾರನ ಹೆಸರು | ನಿತಿನ್ ನಾಯ್ಕ |
| ತಂದೆಯ ಹೆಸರು | ನೀಲಕಂಠ ನಾಯ್ಕ |
| ವಯಸ್ಸು | 31 ವರ್ಷಗಳು |
| ಉದ್ಯೋಗ | ಚಾಲಕ |
| ವಾಸ್ತವ್ಯ | ದುರ್ಗಾಕೇರಿ, ಬಾಂದೇಗದ್ದೆ, ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 07-08-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿಗಳನ್ನು ನೋಡಿರುತ್ತೇನೆ.

ಈಗ್ಗೆ 2-3 ವರ್ಷಗಳ ಹಿಂದೆ ಪೋಲೀಸರು ನನ್ನನ್ನು ಯಾರದ್ದೋ ಮನೆಯ ಹತ್ತಿರ ಕರೆದುಕೊಂಡು ಹೋಗಿದ್ದರು. ಸದರಿ ಮನೆಯಲ್ಲಿ ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿತರ ಜೊತೆಯಲ್ಲಿ ಒಂದು ಪೋಟೋ ತೆಗೆಸಿ ಮನೆಯ ಹತ್ತಿರ ಇದ್ದ ಕಾರಿನ ಮುಂದೆ ನಮ್ಮನ್ನು ನಿಲ್ಲಿಸಿ ಒಂದು ಪೋಟೋ ತೆಗೆದು ಒಂದು ಪಂಚನಾಮೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ಪಂಚನಾಮೆಯ ದೃಢೀಕೃತ ನಕಲನ್ನು ನೋಡಿ ಸಹಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಪೋಟೋಗಳನ್ನು ನೋಡುತ್ತಿದ್ದು ನಿಪಿ-6 ರಿಂದ 9 ಎಂದು ಗುರುತಿಸಲಾಗಿದೆ. ನಿಪಿ-5 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 31-07-2020 ರಂದು ಪೋಲೀಸರು ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ಹಿಡಿದು ಠಾಣೆಗೆ ತಂದಿದ್ದು ಅವರ ಮಾಹಿತಿಯಂತೆ ಕೃತ್ಯಕ್ಕೆ ಬಳಸಿದ್ದ ಕಾರು ಮತ್ತು ಎರಡು ರಾಡಗಳನ್ನು ಹಾಗೂ ಅವರು ತಮ್ಮ ಮನೆಯಲ್ಲಿ ಇಟ್ಟಿದ್ದ ಬಂಗಾರದ ಮೂಗುತಿಯನ್ನು ತೋರಿಸುವುದಾಗಿ ಒಪ್ಪಿಕೊಂಡಿದ್ದು ಅದರಂತೆ ಅವುಗಳನ್ನು ಅಮಾನತ್ತುಪಡಿಸಿಕೊಳ್ಳಲು ಪೋಲೀಸರು ನನ್ನನ್ನು ಹಾಗೂ ಚಾಸಾ-5 ರವರನ್ನು ಪಂಚರಾಗಿ ಬರಬೇಕು ಎಂದು ಕರೆದಿದ್ದು ಅದರಂತೆ ನಾವು ಒಪ್ಪಿ

ಪೋಲೀಸರ ಜೊತೆ ಹೋದಾಗ ಆರೋಪಿತರು ತಮ್ಮ ಮನೆಗೆ ಕರೆದುಕೊಂಡು ಹೋಗಿ ಮನೆಯ ಒಳಗೆ ಒಂದು ಕಪಾಟಿನಲ್ಲಿ ಇಟ್ಟಿದ್ದ ಒಂದು ಬಂಗಾರದ ಮೂಗುತಿಯನ್ನು ಪೋಲೀಸರಿಗೆ ಹಾಜರುಪಡಿಸಿದ್ದು ಆ ಕಾಲಕ್ಕೆ ಪೋಲೀಸರು ನಿಪಿ–8ರಂತೆ ಫೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿತರು ತಮ್ಮ ವಾಸದ ಮನೆಯ ಮುಂದೆ ನಿಲ್ಲಿಸಿದ್ದ ಒಂದು ಕಾರನ್ನು ತೋರಿಸಿ ಸದರಿ ಕಾರನ್ನು ಕೃತ್ಯಕ್ಕೆ ಬಳಸಿರುವುದಾಗಿ ತೋರಿಸಿದ್ದು, ಸದರಿ ಕಾರಿನಲ್ಲಿದ್ದ 2 ಕಬ್ಬಿಣದ ರಾಡನ್ನು ತೋರಿಸಿದ್ದು ಪೋಲೀಸರು ಅವುಗಳನ್ನು ನಿಪಿ–5ರಡಿ ಪಂಚನಾಮೆ ಮಾಡಿ ನಿಪಿ–6 ರಿಂದ 9ರಂತೆ ಫೋಟೋ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ–5ರ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರು ಇರುವುದಿಲ್ಲ ಎಂದು ಹೇಳಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

Sd/–

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**